ತಾಳೆಕೆರೆ 110/11 ಕೆ.ವಿ ವಿದ್ಯುತ್ ಉಪ ಕೇಂದ್ರ;

ತಾಳೆಕೆರೆ ಗ್ರಾಮದ ಉದ್ದೇಶಿತ ವಿದ್ಯುತ್ ಉಪ ಕೇಂದ್ರದ ಸ್ಥಾಪನೆ ಪರಿಶೀಲನೆಯಲ್ಲಿರುತ್ತದೆ.

ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮೇಲ್ದರ್ಜೆಗೇರಿಸುವುದು

155 (354) ಶ್ರೀ ಖಾದರ್ ಯು.ಟಿ. (ಮಂಗಳೂರು): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಉಲ್ಲಾಳ ಪ್ರಾಥಮಿಕ ಆರೋಗ್ಯ ಕೇಂದ್ರವು ಎಷ್ಟು ವ್ಯಾಪ್ತಿಯನ್ನು ಹಾಗೂ ಜನಸಂಖ್ಯೆಯನ್ನು ಹೊಂದಿರುತ್ತದೆ (ವಿವರ ನೀಡುವುದು);

ಆ) ಈ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೆ ಏರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಉಲ್ಲಾಳ ಪ್ರಾಥಮಿಕ ಆರೋಗ್ಯ ಕೇಂದ್ರವು ಉಲ್ಲಾಳ ಪಟ್ಟಣ ಹಾಗೂ ಸೋಮೇಶ್ವರ ಗ್ರಾಮದ ವ್ಯಾಪ್ತಿಯನ್ನು ಹೊಂದಿದ್ದು, ಅಲ್ಲಿನ ಜನಸಂಖ್ಯೆಯು 87.000 ಆಗಿದೆ.

ಆ) ರಾಜ್ಯದಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವುದು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಸಾರ್ವಜನಿಕ ಆಸ್ಪತ್ರೆ ಇತ್ಯಾದಿಯ ಮೇಲ್ದರ್ಜೆಗೇರಿಸುವಿಕೆಯನ್ನು ಒಂದು ನೀತಿ ನಿರ್ಣಯವಾಗಿ ದಿನಾಂಕ: 11-01-2011ರಿಂದ ಜಾರಿಗೆ ಬರುವಂತೆ ಮೂರು ವರ್ಷಗಳ ಅವಧಿಗೆ ಸರ್ಕಾರವು ತಡೆಹಿಡಿದಿದೆ.

ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಳಾಂತರಿಸುವುದು

157 (10) ಶ್ರೀ ಎಂ.ಟಿ. ಕೃಷ್ಣಪ್ಪ (ತುರುವೇಕೆರೆ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ತುಮಕೂರು ಜಿಲ್ಲೆಯ ತುರುವೇಕೆರೆ ತಾಲ್ಲೂಕಿನ ಕೊಂಡಜ್ಜಿ ಹಾಗೂ ಆನೇಕೆರೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸೀಗೆಹಳ್ಳಿ ಮತ್ತು ಬ್ಯಾಡರಹಳ್ಳಿ ಗೇಟ್‌ಗೆ ವರ್ಗಾಯಿಸಲು ಮನವಿ ಸಲ್ಲಿಸಲಾಗಿದೆಯೇ?